ಈ) ಬೈಂದೂರು ಕ್ಷೇತ್ರದ ಸರ್ಕಾರಿ ಪ್ರೌಢಶಾಲೆಗಳಲ್ಲಿ 1997-98ನೇ ಸಾಲಿನಲ್ಲಿ ಯಾವುದೇ ಹೊಸ ವಿಭಾಗಗಳನ್ನು ತೆರೆಯಲಾಗಿಲ್ಲ ಹಾಗೂ ಈ ಸಾಲಿನಲ್ಲಿ ಯಾವುದೇ ಹೊಸ ಹುದ್ದೆಗಳು ಮಂಜೂರಾಗಿಲ್ಲ.

ವಿಷಯ: ತಾಲ್ಲೂಕು ಪಂಚಾಯತ್ ಸಭೆಗಳಿಗೆ ಜಿಲ್ಲಾ ಪಂಚಾಯತ್‌ಸದಸ್ಯರು ಹಾಜರಾಗುವ ಕುರಿತು.

2467 (3165)

ಶ್ರೀ ಐ.ಎಂ.ಜಯರಾಮಶೆಟ್ಟಿ (ಬೈಂದೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಪಂಚಾಯತ್ ಸದಸ್ಯರನ್ನು ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಗಳಿಗೆ ಆಹ್ವಾನಿಸದೇ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಂ.ಪಿ.ಪ್ರಕಾಶ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ಹೌದು.

ಆ) ಜಿಲ್ಲಾ ಪಂಚಾಯತ್ ಸದಸ್ಯರನ್ನು ತಾಲ್ಲೂಕು ಪಂಚಾಯತ್ ಸಾಮಾನ್ಯ ಸಭೆಗಳಿಗೆ ಆಹ್ವಾನಿಸುವ ಬಗ್ಗೆ ಅಧಿನಿಯಮದಲ್ಲಿ ಅವಕಾಶ ಕಲ್ಪಿಸಿರುವುದಿಲ್ಲ

ವಿಷಯ: ಅನುದಾನಿತ ಕಾಲೇಜುಗಳಲ್ಲಿನ ನೌಕರರ ವೇತನಸಹಿತ ಸೇವಾಭದ್ರತೆ

2468 (3606)

ಶ್ರೀ ಟಿ.ಬಿ.ಜಯಚಂದ್ರ (ಕಳ್ಳಂಬೆಳ್ಳ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿದ್ಯಾರ್ಥಿಗಳ ಸಂಖ್ಯೆ ಇಳಿಮುಖ ಎಂಬ ಕಾರಣದಿಂದ 10ರಿಂದ 15 ವರ್ಷಸೇವೆ ಸಲ್ಲಿಸಿರುವ ಅನುದಾನಿತ ಪದವಿಪೂರ್ವ ಕಾಲೇಜಿನ ಉಪನ್ಯಾಸಕರಿಗೆ ವೇತನ ತಡೆಹಿಡಿದಿರುವ ಬಗ್ಗೆ ನಿಜವಲ್ಲವೇ?

ಆ) ಈ ಹಂತದಲ್ಲಿ ವೇತನ ನಿಲುಗಡೆಯಾದರೆ ಅವರ ಕುಟುಂಬಗಳ ಪಾಡೇನು?

ಇ) ವೇತನ ಸಹಿತ ಸೇವಾ ಭದ್ರತೆ ಒದಗಿಸಿ ಈ ನೌಕರರನ್ನು ಸರ್ಕಾರಿ ನೌಕರರ ರೀತಿಯಲ್ಲಿ ಪರಿಗಣಿಸುವುದು ಸೂಕ್ತವಲ್ಲವೇ?